Karnatak Law Society's
**Vishwanathrao Deshpande Institute of Technology**
**(Approved by AICTE, New Delhi. Affiliated to VTU, Belagavi)**
**(Recognised Under Section 2(f) by UGC, New Delhi)**
**Udyog Vidya Nagar, Haliyal – 581329, Dist: Uttar Kannada (Karnataka)**
**Phone: 08284-220861, 220334, 221409, Fax: 08284-220813**
**www.klsvdit.edu.in principal@klsvdit.edu.in**

Date: 13-09-2022

**ಪತ್ರಿಕಾ ಪ್ರಕಟಣೆ:**

## ಸಾಮಾಜಿಕ ಜಾಲತಾಣ ಮಾಹಿತಿ ಮತ್ತು ಮಾರ್ಗದರ್ಶನ ಕಾರ್ಯಾಗಾರ ಯಶಸ್ವಿ

ಕೆ.ಎಲ್.ಎಸ್. ವಿ.ಡಿ.ಐ.ಟಿ. ಹಳಿಯಾಳದಲ್ಲಿ ಪ್ರೌಢಶಾಲಾ ವಿದ್ಯಾರ್ಥಿಗಳಿಗಾಗಿ ಸಾಮಾಜಿಕ ಜಾಲತಾಣದ ಮಾಹಿತಿ ಮತ್ತು ಮಾರ್ಗದರ್ಶನ ಎಂಬ ಒಂದು ದಿನದ ಕಾರ್ಯಾಗಾರವನ್ನು ಸಪ್ಟೆಂಬರ್ 13 ರಂದು ಆಯೋಜಿಸಲಾಗಿತ್ತು. ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಶಿಕ್ಷಣ ತಜ್ಞರಾದ ಶ್ರೀಮತಿ. ಸಂಗೀತ ಪ್ರಭು ಅವರು " ವಿದ್ಯಾರ್ಥಿನಿಯರು ಪಾಶ್ಚಿಮಾತ್ಯ ಸಂಸ್ಕೃತಿಯ ಮೋಹಕ್ಕೊಳಗಾಗದೆ, ಸನಾತನ ಭಾರತೀಯ ಸಂಸ್ಕೃತಿಯನ್ನು ಅನುಸರಿಸಬೇಕೆಂದು ಹೇಳಿದರು. ವಿದ್ಯಾರ್ಥಿಗಳು ಯಶಸ್ವಿಯಾಗಲು ಶಿಸ್ತಿನ ಜೀವನ ಅತ್ಯಗತ್ಯ ಎಂದು ನುಡಿದರು. ಮಾತಾಪಿತರ ವಾಕ್ಯವನ್ನು ಪರಿಪಾಲನೆ ಮಾಡಲು ಸೂಚಿಸಿದರು". ಅಧ್ಯಕ್ಷತೆವಹಿಸಿ ಮಾತನಾಡಿದ ಪ್ರಾಚಾರ್ಯರಾದ ಡಾ.ವಿ.ಎ.ಕುಲಕರ್ಣಿಯವರು ಗುರು ಹಿರಿಯರಿಗೆ ಗೌರವ ನೀಡಬೇಕು, ಕಠಿಣ ಪರಿಶ್ರಮದಿಂದ ಸಾಧನೆಯ ಮೆಟ್ಟಿಲನ್ನೇರುವಂತೆ ವಿದ್ಯಾರ್ಥಿನಿಯರಿಗೆ ಕರೆ ನೀಡಿದರು. ಉತ್ತಮ ಆದರ್ಶ ಹಾಗೂ ಮೌಲ್ಯವನ್ನು ಜೀವನದಲ್ಲಿ ಅಳವಡಿಸಿಕೊಳ್ಳುವಂತೆ ನುಡಿದರು. ಕಾರ್ಯಾಗಾರದ ಸಂಪನ್ಮೂಲ ವ್ಯಕ್ತಿ ಹಾಗೂ ಗಣಿತಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ.ಮೀನಲ್ ಕೆ ಅವರು ವಿದ್ಯಾರ್ಥಿನಿಯರು ಸಾಮಾಜಿಕ ಜಾಲತಾಣಗಳಲ್ಲಿ ತಮ್ಮನ್ನು ಗುರುತಿಸಿಕೊಳ್ಳುವಾಗ ಜಾಗರೂಕರಾಗಿರಬೇಕು, ಖಾಸಗಿ ಮಾಹಿತಿಗಳನ್ನು ಹೆಚ್ಚಾಗಿ ಹಂಚಿಕೊಳ್ಳದಂತೆ ಸಲಹೆ ನೀಡಿದರು. ಅಂತರ್ಜಾಲವನ್ನು ನಮ್ಮ ಪೂರಕ ಬೆಳವಣಿಗೆಗೆ ಉಪಯೋಗಿಸಬೇಕು ಹೊರತು ದುರ್ಬಳಕೆ ಮಾಡಿಕೊಳ್ಳದಂತೆ ಸೂಚಿಸಿದರು. ಸಾಮಾಜಿಕ ಜಾಲತಾಣದಲ್ಲಿ ಅಪರಿಚಿತರೊಂದಿಗೆ ಸ್ನೇಹ ಜೀವನಕ್ಕೆ ಮುಳ್ಳಾಗುವ ಸಾಧ್ಯತೆ ತರಬಹುದೆಂದು ಕಿವಿಮಾತು ಹೇಳಿದರು. ಹಳಿಯಾಳದ ಜಾವಳಿಗಲ್ಲಿ ಸರಕಾರಿ ಹೆಣ್ಣು ಮಕ್ಕಳ ಪ್ರೌಢಶಾಲೆಯ 90ಕ್ಕೂ ಅಧಿಕ ವಿದ್ಯಾರ್ಥಿನಿಯರು ಈ ಕಾರ್ಯಾಗಾರದಲ್ಲಿ ಸಕ್ರಿಯವಾಗಿ ಪಾಲ್ಗೊಂಡಿದ್ದರು. ಪ್ರೌಢಶಾಲೆಯ ಮುಖ್ಯೋಪಾಧ್ಯಾಯರಾದ ಶ್ರೀ.ವಿನಾಯಕ ಶೇಟ್ ಅವರು ವಿದ್ಯಾರ್ಥಿನಿಯರಿಗೆ ಇಂತಹ ಕಾರ್ಯಾಗಾರಗಳು ಅತ್ಯಂತ ಉಪಯುಕ್ತವಾಗಿದ್ದು, ಕಾರ್ಯಕ್ರಮ ಆಯೋಜಿಸಿದ ಮಹಾವಿದ್ಯಾಲಯಕ್ಕೆ ಧನ್ಯವಾದ ಅರ್ಪಿಸಿದರು.

ಪ್ರೊ. ಪ್ಲಾಸಿನ್ ಡಿ ಸ್ವಾಗತಿಸಿದರು. ಪ್ರೊ. ರಾಜೇಶ್ವರಿ ಎನ್ ವಂದಿಸಿದರು. ಪ್ರೊ. ರೋಹಿಣಿ ಕೆ ನಿರೂಪಿಸಿದರು. ಮಹಾವಿದ್ಯಾಲಯದ ಎಲ್ಲಾ ಮಹಿಳಾ ಸಿಬ್ಬಂದಿಗಳು ಉಪಸ್ಥಿತರಿದ್ದರು. ಕಾರ್ಯಕ್ರಮವನ್ನು ಮಹಿಳಾ ವಿಭಾಗ ಮತ್ತು ಐ.ಕ್ಯೂ.ಎ.ಸಿ. ಜಂಟಿ ಸಹಯೋಗದಲ್ಲಿ ಆಯೋಜಿಸಲಾಗಿತ್ತು.

ಪ್ರಾಂಶುಪಾಲರು

**Principal**
**KLS Vishwanathrao Deshpande Institute of Technology, Haliyal**


KLS
VDIT